**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ಇಂಡಿ.</u>**

**OS No**.113/2015

**DW**:3

**ದಿನಾಂಕ 12.01.2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**<u>ಪಾಟೀ ಸವಾಲುಃ ವಾದಿ ಪರ ಶ್ರೀ.ಎಸ್.ಎಸ್.ಪಿ. ವಕೀಲರಿಂದ:</u>**

ನಾನು ದಾವಾ ಆಸ್ತಿಯನ್ನು ನೋಡಿರುತ್ತೇನೆ. ದಾವಾ ಆಸ್ತಿ ಸರ್ವೆ ನಂ.258/2 ಅ ಇರುತ್ತದೆ. ನಾನು ಹೊಲದಲ್ಲಿ ಇರುತ್ತೇನೆ. ನನ್ನ ಹೊಲದ ಸರ್ವೆ ನಂ.254 ಇರುತ್ತದೆ. ಪ್ರತಿವಾದಿಯ ಹೆಸರಿಗೆ ದಾವಾ ಆಸ್ತಿಯು ಹೇಗೆ ಬಂದಿರುತ್ತದೆ ಎಂದು ನನಗೆ ಗೊತ್ತಿಲ್ಲ. ದಾವಾ ಆಸ್ತಿಯಲ್ಲಿ ಈಗ ಕಬ್ಬು ಮಾತ್ರ ಇರುತ್ತದೆ. ದಾವಾ ಆಸ್ತಿಯು ವಾದಿಯ ಜಮೀನು ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಪ್ರತಿವಾದಿಯು ದಾವಾ ಜಮೀನಿನಲ್ಲಿ ಕಬ್ಬು ಬೆಳೆಯುತ್ತಾರೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಯು 20 ವರ್ಷಗಳಿಂದ ಸಾಗುವಳಿ ಮಾಡುತ್ತಾರೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈ ದಾವೆಯ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪ್ರತಿವಾದಿಯು ನನಗೆ ಬಹಳ ಬೇಕಾಗಿರುವ ವ್ಯಕ್ತಿ ಆಗಿರುವ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ವಾದಿಯು ಕಬ್ಜಾ ವಹಿವಾಟಿನಲ್ಲಿ ಇದ್ದರು ಸಹ ಇಲ್ಲವೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಾಕ್ಷ್ಯಾಪ್ರಮಾಣ ಪತ್ರಿಕೆಯಲ್ಲಿ ಬರೆಸಿರುವ ಎಲ್ಲಾ ಅಂಶಗಳು ಸುಳ್ಳು ಇರುತ್ತವೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ: ಇಲ್ಲ:</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೆ. ಸರಿ ಇದೆ.

ಸಹಿ/-

ಜೆ.ಎಂ.ಎಫ್.ಸಿ. ನ್ಯಾಯಾಲಯ

ಇಂಡಿ.